ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಕೆರೆಗಳ ಹೂಳೆತ್ತುವ ಕುರಿತು

ಶ್ರೀ ವಿಜಯ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

573 (532) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯಲ್ಲಿ ಕೆರೆಗಳ ಹೂಳೆತ್ತುವ ಕಾಮಗಾರಿಗಳಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; ಎಷ್ಟು ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ;

(ಆ) ಬೀದರ್ ಜಿಲ್ಲೆಯ ಎಷ್ಟು ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ; ಉದ್ಯೋಗ ಖಾತ್ರಿ ಅನುದಾನ ಬಿಟ್ಟು ಪ್ರತ್ಯೇಕವಾಗಿ ಎಷ್ಟು ಅನುದಾನ ಖರ್ಚು ಮಾಡಲಾಗಿದೆ; (ಪ್ರತಿ ಕೆರೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕೆರೆಗಳ ಹೂಳೆತ್ತುವ ಕಾಮಗಾರಿಗಳಲ್ಲಿ ಉದ್ಯೋಗ ಖಾತ್ರಿ ಯೋಜನೆಯಿಂದಲೂ ಹಣ ಪಾವತಿಸಲಾಗಿದೆಯೇ; ಹಾಗಿದ್ದಲ್ಲಿ, ಪ್ರತಿ ಕೆರೆಗೆ ಖರ್ಚಾದ ಅನುದಾನ ಎಷ್ಟು? (ಪ್ರತಿ ಕೆರೆಯ ಮಾಹಿತಿ ನೀಡುವುದು)